

# ಎನ್‌ಐಟಿ ಕ್ರೀಡಾಕೂಟದಲ್ಲಿ ಎನ್‌ಐಟಿಕೆ ಚಾಂಪಿಯನ್ಸ್

**ಸಂ.ಕ.ಸಮಾಚಾರ, ಮಂಗಳೂರು**

2023–24ನೇ ಸಾಲಿನ ಅಖಿಲ ಭಾರತ ಅಂತರ ಎನ್‌ಐಟಿ ಕ್ರೀಡಾಕೂಟದಲ್ಲಿ ಸುರತ್ಕಲ್ ತಂಡ ಹಾಕಿ ಮತ್ತು ಕ್ರಿಕೆಟ್‌ನಲ್ಲಿ ಚಿನ್ನ ಮತ್ತು ಕಂಚಿನ ಪದಕಗಳನ್ನು ತನ್ನದಾಗಿಸಿಕೊಂಡಿದೆ.

ಜ.5ರಿಂದ 8ರವರೆಗೆ ತಮಿಳುನಾಡಿನ ಎನ್‌ಐಟಿ ತಿರುಚ್ಚಿಯಲ್ಲಿ ನಡೆದ ಪಂದ್ಯಾಟದಲ್ಲಿ ಪುರುಷರ ಹಾಕಿ ಪಂದ್ಯಾವಳಿಯಲ್ಲಿ ಭಾಗವಹಿಸಿದ 9 ಎನ್‌ಐಟಿಗಳಲ್ಲಿ ಎನ್‌ಐಟಿಕೆ ಸುರತ್ಕಲ್ ವಿಜಯಶಾಲಿಯಾಗಿ ಹೊರಹೊಮ್ಮಿತು.

ಲೀಗ್ ಕಮ್ ನಾಕೌಟ್ ಆಧಾರದ ಮೇಲೆ ಆಡಿದ ಪಂದ್ಯಗಳು ಎನ್‌ಐಟಿಕೆ ಸುರತ್ಕಲ್ ಚಿನ್ನದ ಪದಕವನ್ನು ತನ್ನದಾಗಿಸಿಕೊಂಡಿದೆ.

ಪುರುಷರ ಕ್ರಿಕೆಟ್ ಪಂದ್ಯಾವಳಿಯಲ್ಲಿ 27 ಎನ್‌ಐಟಿಗಳಿಂದ ತಂಡಗಳು ಭಾಗವಹಿಸಿದ್ದು, ಲೀಗ್ ಕಮ್ ನಾಕೌಟ್ ಮಾದರಿಯಲ್ಲಿ ನಡೆದ ಎನ್‌ಐಟಿಕೆ ಸುರತ್ಕಲ್ ತಂಡ 2ನೇ ಸ್ಥಾನ ಪಡೆದು ಕಂಚಿನ ಪದಕ ತನ್ನದಾಗಿಸಿಕೊಂಡಿತು.

ದ್ರೋಣಾಚಾರ್ಯ ಪ್ರಶಸ್ತಿ ಪುರಸ್ಕೃತ ಮತ್ತು ಭಾರತೀಯ ರಾಷ್ಟ್ರೀಯ ಅಥ್ಲೆಟಿಕ್ ತಂಡದ ಮುಖ್ಯ ತರಬೇತುದಾರ ಪಿ.ರಾಧಾಕೃಷ್ಣನ್ ನಾಯರ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು.

ಎನ್‌ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ, ಡೀನ್ ವಿದ್ಯಾರ್ಥಿ ಕಲ್ಯಾಣ, ಎಸ್‌ಎಎಸ್ ಅಧಿಕಾರಿಗಳು, ಸಿಬ್ಬಂದಿ ಮತ್ತು ಎನ್‌ಐಟಿಕೆ ವಿದ್ಯಾರ್ಥಿಗಳು ಎನ್‌ಐಟಿಕೆ ವಿಜೇತರ ಅತ್ಯುತ್ತಮ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

Samyuktha Karnataka, Date:16/01/24, p.no - 02